213
05/01/18

<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ರಾಜೀವ್‌ಗಾಂಧಿ ಸಾಲ ರೂಪದ ವಿದ್ಯಾರ್ಥಿ ವೇತನದ ಫಲಾನುಭವಿಗಳ ಕುಟುಂಬದ ಆದಾಯದ ಮಿತಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ: (1) 2013-14ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 188.

(2) ಸರ್ಕಾರದ ಆದೇಶ ಸಂಖ್ಯೆ: ಇಡಿ 128 ಮಾಹಿತಿ 2014 ದಿ: 05.02.2014.

(3) ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಕಾಶಿಇ/262/ಎಲ್.ಪಿ.ಎಂ/ಸಭೆ/ರಾಗಾಸಾ/2016-17/ವಿ.ವೇ ದಿ:13.07.2017.

**************

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಆಯವ್ಯಯ ಭಾಷಣದ ಕಂಡಿಕೆ 188 ರಲ್ಲಿ "ಆರ್ಥಿಕವಾಗಿ ಹಿಂದುಳಿದ ವರ್ಗಕ್ಕೆ ಸೇರಿದ ಹಾಗೂ ವಾರ್ಷಿಕ ವರಮಾನ 2.5 ಲಕ್ಷ ರೂಗಳಿಗೂ ಕಡಿಮೆ ಇರುವ ಬಡ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗಕ್ಕಾಗಿ ಪ್ರೋತ್ಸಾಹಿಸಲು ಅವರ ಅಧ್ಯಯನಕ್ಕೆ ಬೇಕಾದ ಪುಸ್ತಕ, ವಸ್ತ್ರ, ಉಪಕರಣಗಳು ಮುಂತಾದವುಗಳ ವೆಚ್ಚವನ್ನು ಭರಿಸಲು ಬ್ಯಾಂಕಿನಿಂದ ಸಾಲ ಪಡೆದಿರುವವರಿಗೆ ರಾಜೀವ್ ಗಾಂಧಿ ಶಿಷ್ಯವೇತನವನ್ನು ಜಾರಿಗೆ ತರಲಾಗುವುದು" ಎಂದು ಘೋಷಿಸಲಾಗಿತ್ತು.

ಮೇಲೆ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ರಾಜ್ಯ ಸರ್ಕಾರ ನಡೆಸುತ್ತಿರುವ ವಿಶ್ವವಿದ್ಯಾಲಯ, ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಲ್ಲಿನ (ಅನುದಾನಿತ ಕೋರ್ಸುಗಳಿಗೆ ಮಾತ್ರ) ಎಲ್ಲಾ ಸಾಮಾನ್ಯ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸುಗಳ ವಿದ್ಯಾರ್ಥಿಗಳಿಗೆ ಅನುಷ್ಠಾನಗೊಳಿಸಲು ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರಿಗೆ ಅನುಮತಿ ನೀಡಿ ಸರ್ಕಾರದ ಅನುಬಂಧದಲ್ಲಿ ಈ ಯೋಜನೆಯನ್ನು ಕುಟುಂಬದ ವಾರ್ಷಿಕ ಆದಾಯ ರೂ.2.5 ಲಕ್ಷ ಮಿತಿಯೊಳಗಿನ ವಿದ್ಯಾರ್ಥಿಗಳಿಗೆ ವಿಸ್ತರಿಸಲು ಆದೇಶ ಹೊರಡಿಸಲಾಗಿದೆ.

ಮೇಲೆ (3)ರಲ್ಲಿ ಓದಲಾದ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರ ಪತ್ರದಲ್ಲಿ ರಾಜೀವ್‌ಗಾಂಧಿ ಸಾಲರೂಪದ ವಿದ್ಯಾರ್ಥಿವೇತನ ಯೋಜನೆಯಡಿ ವಿದ್ಯಾರ್ಥಿಗಳು ಸಾಲ ಪಡೆಯಬೇಕಾದಲ್ಲಿ ವಿದ್ಯಾರ್ಥಿಗಳ ಕುಟುಂಬದ ಆದಾಯ ರೂ.2.5 ಲಕ್ಷಕ್ಕಿಂತಲೂ ಕಡಿಮೆ ಇರಬೇಕು ಎಂಬ ಷರತ್ತು ಯೋಜನೆಯ ಪ್ರಗತಿಗೆ ಅಡ್ಡಿಯಾಗಿರುವುದರಿಂದ ಈ ಆದಾಯದ ಮಿತಿಯನ್ನು ರೂ.2.5 ಲಕ್ಷಗಳಿಂದ ರೂ.4.00 ಲಕ್ಷಗಳಿಗೆ ವಿಸ್ತರಿಸಿ ಆದೇಶದಲ್ಲಿ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಸಾಲ ಪಡೆಯಲು ಅನುಕೂಲವಾಗುವುದರೊಂದಿಗೆ ಆರ್ಥಿಕ ಕಾರಣಗಳಿಗಾಗಿ ಉನ್ನತ ಶಿಕ್ಷಣದಿಂದ ವಂಚಿತರಾಗುವ ಯುವಕರನ್ನು ಉನ್ನತ ಶಿಕ್ಷಣ ಮುಂದುವರೆಸಲು ಪ್ರೋತ್ಸಾಹಿಸಬಹುದಾಗಿರುತ್ತದೆ. ಆದ್ದರಿಂದ ಯೋಜನೆಯ ಫಲಾನುಭವಿ ವಿದ್ಯಾರ್ಥಿಗಳ ಕುಟುಂಬದ ಆದಾಯದ ಮಿತಿಯನ್ನು ರೂ.2.5 ಲಕ್ಷಗಳಿಂದ ರೂ.4.00 ಲಕ್ಷಕ್ಕೆ ವಿಸ್ತರಿಸಲು ಸರ್ಕಾರದ ಆದೇಶ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ ಇಡಿ 46 ಹೆಚ್‌ಪಿಸಿ 2017</u>**
**<u>ಬೆಂಗಳೂರು, ದಿನಾಂಕ: 02-01-2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ನಡೆಸುತ್ತಿರುವ ವಿಶ್ವವಿದ್ಯಾಲಯ, ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಲ್ಲಿನ (ಅನುದಾನಿತ ಕೋರ್ಸುಗಳಿಗೆ ಮಾತ್ರ) ಎಲ್ಲಾ ಸಾಮಾನ್ಯ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸುಗಳ ವಿದ್ಯಾರ್ಥಿಗಳಿಗೆ ರಾಜೀವ್‌ಗಾಂಧಿ ಸಾಲ

4.1.18

ಡಿ.ಎಸ್.ವೇ.ಕ.ನ)

ರೂಪದ ವಿದ್ಯಾರ್ಥಿ ವೇತನ ಯೋಜನೆಯಡಿ ಸಾಲ ಪಡೆಯಲು ನಿಗದಿಪಡಿಸಲಾದ ವಿದ್ಯಾರ್ಥಿಗಳ ಕುಟುಂಬದ ಆದಾಯದ ಮಿತಿಯನ್ನು ರೂ.2.50 ಲಕ್ಷಗಳಿಂದ ರೂ.4.00 ಲಕ್ಷಗಳಿಗೆ ವಿಸ್ತರಿಸಿ ಸರ್ಕಾರವು ಆದೇಶಿಸಿದೆ. ಸರ್ಕಾರದ ಆದೇಶ ಸಂಖ್ಯೆ: ಇಡಿ 128 ಮಾಹಿತಿ 2014 ದಿ: 05.02.2014ರಲ್ಲಿನ ಇತರೆ ಷರತ್ತುಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ.

(ಎಸ್.ಆರ್.ಎಸ್.ನಾಥನ್)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ 6/1/18
ಸರ್ಕಾರದ ಅಧೀನ ಕಾರ್ಯದರ್ಶಿ(ಯೋಜನೆ)
ಉನ್ನತ ಶಿಕ್ಷಣ ಇಲಾಖೆ

**ಪ್ರತಿಯನ್ನು:**

1. ಮಹಾಲೇಖಪಾಲರು, ಕರ್ನಾಟಕ (ಆಡಿಟ್ 1 ಮತ್ತು 2), ಬೆಂಗಳೂರು.
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
4. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಉನ್ನತ ಶಿಕ್ಷಣ) ಶಿಕ್ಷಣ ಇಲಾಖೆ ಅವರ ಆಪ್ತ ಕಾರ್ಯದರ್ಶಿಗಳು.
6. ಸಮನ್ವಯಾಧಿಕಾರಿಗಳು, ಮಾಹಿತಿ ಕೇಂದ್ರ, ಉನ್ನತ ಶಿಕ್ಷಣ ಇಲಾಖೆ.
7. ಹೆಚ್ಚುವರಿ ಪ್ರತಿಗಳು.

**ಕರ್ನಾಟಕ ಸರ್ಕಾರ**

**<u>ಕಾಲೇಜು ಶಿಕ್ಷಣ ಇಲಾಖೆ</u>**

ಸಂಖ್ಯೆ:ಕಾಶಿಇ/262/ಎಲ್‌ಡಿಎಂಸಭೆ/ರಾಗಾಸಾವಿವೇ/2016-17

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 09.01.2018.

ಮೇಲ್ಕಂಡ ಸರ್ಕಾರದ ಆದೇಶವನ್ನು ಸಂಬಂಧಪಟ್ಟವರ ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ ಪರಿಚಲಿಸಲಾಗಿದೆ.

**ಕಾಲೇಜು ಶಿಕ್ಷಣ ನಿರ್ದೇಶಕರು**

**ಇವರಿಗೆ:**

1. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ
2. ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಇಲಾಖಾ ವೆಬ್‌ಸೈಟ್ ಮುಖಾಂತರ.
3. ಜನರಲ್ ಮ್ಯಾನೇಜರ್, CREDIT-RETAIL & MSME, ವಿಜಯ ಬ್ಯಾಂಕ್, ಕೇಂದ್ರ ಕಛೇರಿ, 41/2, ಎಂ.ಜಿ.ರಸ್ತೆ, ಬೆಂಗಳೂರು-560 001.
4. ಸಂಯೋಜಕರು, State Level Bankers Committee & ಜನರಲ್ ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, ಕಾರ್ಪೋರೇಟ್ ಕಛೇರಿ, ಗಾಂಧಿನಗರ, ಬೆಂಗಳೂರು-560 009.

**ಪ್ರತಿಯನ್ನು:**

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು – ಮಾಹಿತಿಗಾಗಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಉನ್ನತ ಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು – ಮಾಹಿತಿಗಾಗಿ.
3. ಕಾಲೇಜು ಶಿಕ್ಷಣ ಆಯುಕ್ತರ ಆಪ್ತ ಶಾಖೆ, ಕೇಂದ್ರ ಕಛೇರಿ, ಬೆಂಗಳೂರು – ಮಾಹಿತಿಗಾಗಿ. 4.ಕಛೇರಿ ಪ್ರತಿ.